# ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಕಿಶೋರ್ ಕುಮಾರ್ ಪುತ್ತೂರು ರವರು ಮಂಡಿಸಿರುವ ಶೂನ್ಯವೇಳೆಯ ಪ್ರಸ್ತಾವನೆಗೆ ಉತ್ತರ

**ಪ್ರಶ್ನೆ:** ದಿನಾಂಕ: 14.08.2025ರ "ಸಂಯುಕ್ತ ಕರ್ನಾಟಕ" ದಿನ ಪತ್ರಿಕೆಯಲ್ಲಿ ಪ್ರಕಟವಾದ ಧರ್ಮಸ್ಥಳ ಗ್ರಾಮದಲ್ಲಿ ಶವ ಹೂತ ದೂರುದಾರನಿಗೆ ಮಂಪರು ಪರೀಕ್ಷೆ ಮಾಡಲು ಗೃಹ ಇಲಾಖೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸರ್ಕಾರಕ್ಕೆ ಆಗ್ರಹಿಸುತ್ತೇನೆ.

ದಕ್ಷಿಣ ಕನ್ನಡ ಜಿಲ್ಲೆಯ ಧರ್ಮಸ್ಥಳ ಗ್ರಾಮದ ನೇತ್ರಾವತಿ ನದಿ ಬಳಿ 13 ಸ್ಥಳಗಳಲ್ಲಿ ಶವ ಹೂತು ಹಾಕಿರುವ ಬಗ್ಗೆ ಅನಾಮಿಕ ದೂರು ನೀಡಿದ ಮೇರೆಗೆ ರಾಜ್ಯ ಸರ್ಕಾರವು ವಿಶೇಷ ತನಿಖಾ ತಂಡ ರಚಿಸಲಾಗಿ ದೂರುದಾರನು ಗುರುತಿಸಿದ 13 ಸ್ಥಳಗಳಲ್ಲಿ ಕಳೇಬರವನ್ನು ಪತ್ತೆ ಹಚ್ಚುವ ಸಲುವಾಗಿ ಅಗೆಯಲಾಗಿ ಅನಾಮಿಕ ಗುರುತಿಸಿದ 6ನೇ ಗುರುತಿನಲ್ಲಿ ಮಾತ್ರ ಪುರುಷನ ಕಳೇಬರ ದೊರಕಿದ್ದು, ಆಧುನಿಕ ತಂತ್ರಜ್ಞಾನವನ್ನು (GPR) ಪ್ರಯೋಗಿಸಿದರೂ ಕೂಡ ಮಿಕ್ಕಿದ ಯಾವ ಸ್ಥಳದಲ್ಲೂ ಕಳೇಬರದ ಕುರುಹು ಸಿಕ್ಕಿರುವುದಿಲ್ಲ.

ಸದರಿ ಅನಾಮಿಕ ದೂರುದಾರನು ಪ್ರಥಮವಾಗಿ ದೂರು ನೀಡಿದ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯವರು ಅನಾಮಿಕನಿಗೆ ಮಂಪರು ಪರೀಕ್ಷೆ ಮಾಡಿ ವರದಿ ಬಂದ ನಂತರ ಈ ಬಗ್ಗೆ ಕ್ರಮ ಕೈಗೊಳ್ಳುವ ಬಗ್ಗೆ ನಿರ್ಧರಿಸಿದ್ದರು ಎಂಬ ಮಾಹಿತಿ ಮಾಧ್ಯಮದಲ್ಲಿ ಪ್ರಕಟವಾಗಿತ್ತು. ಅದೇ ಸಮಯದಲ್ಲಿ ಮುಖ್ಯಮಂತ್ರಿಯವರು ಯಾವುದೇ ಕಾರಣಕ್ಕೂ ಸದರಿ ತನಿಖೆಗೆ ವಿಶೇಷ ತನಿಖಾ ತಂಡ ರಚಿಸುವುದಿಲ್ಲ ಎಂದು ಮಾಧ್ಯಮ ಪ್ರಕಟಣೆ ನೀಡಿದ ಮರುದಿನವೇ ತರಾತುರಿಯಲ್ಲಿ ಎಸ್‌ಐಟಿ ರಚಿಸಿದ ಹಿಂದಿರುವ ಕಾರಣವೇನು? ಇದರಿಂದ ನಮಗೆ ಸ್ಪಷ್ಟವಾಗುವುದೇನೆಂದರೆ, ಸರ್ಕಾರ ಹಿಂದೂ ವಿರೋಧಿ ಎಡಪಂಥಿಯರ ಒತ್ತಡಕ್ಕೆ ಮಣಿದಿರುವುದು ಸ್ಪಷ್ಟವಾಗುತ್ತದೆ. ಇದನ್ನು ದಕ್ಷಿಣ ಕನ್ನಡ ಜಿಲ್ಲೆಯ ಉಸ್ತುವಾರಿ ಸಚಿವರ ಮಾಧ್ಯಮ ಹೇಳಿಕೆಯೂ ಕೂಡ ದೃಢೀಕರಿಸಿದೆ.

ಶ್ರೀ ಕ್ಷೇತ್ರ ಧರ್ಮಸ್ಥಳವು ಹಿಂದೂಗಳ ಧಾರ್ಮಿಕ ಶ್ರದ್ಧಾ ಕೇಂದ್ರವಾಗಿದ್ದು, ರಾಜ್ಯದ ಸರ್ವಧರ್ಮಿಯರಿಗೂ ಆರೋಗ್ಯ ಮತ್ತು ಗ್ರಾಮೀಣಾಭಿವೃದ್ಧಿಯಲ್ಲಿ ಉನ್ನತ ಮಟ್ಟದ ಸೇವೆಯನ್ನು ನೀಡುತ್ತಾ, ರಾಜ್ಯದ ಅಸಂಖ್ಯಾ ಕುಟುಂಬಗಳನ್ನು ಸದೃಢಗೊಳಿಸುವ ಸೇವೆ ನೀಡಿ ಮಾದರಿಯಾಗಿದೆ. ನಮ್ಮ ಶ್ರದ್ಧಾಕೇಂದ್ರಗಳನ್ನು ಉಳಿಸಲು ಸರ್ಕಾರವು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ದೂರುದಾರನಿಗೆ ಮಂಪರು ಪರೀಕ್ಷೆ ನಡೆಸಿ ಶಿಸ್ತು ಕ್ರಮ ಕೈಗೊಳ್ಳಬೇಕು ಎಂಬುದರ ಕುರಿತು.

**ಉತ್ತರ:** ಧರ್ಮಸ್ಥಳ ಗ್ರಾಮದಲ್ಲಿ ಶವ ಹೂತಿರುವ ಪ್ರಕರಣದ ತನಿಖೆಗಾಗಿ ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ 142 ಸಿಒಡಿ 2025, ದಿನಾಂಕ: 19.07.2025ರನ್ವಯ ವಿಶೇಷ ತನಿಖಾ ತಂಡವನ್ನು ರಚಿಸಿರುತ್ತದೆ. ಈ ಪ್ರಕರಣದ ತನಿಖೆಯನ್ನು ವಿಶೇಷ ತನಿಖಾ ತಂಡ ನಡೆಸುತ್ತಿದ್ದು, ತನಿಖೆ ಪ್ರಗತಿಯಲ್ಲಿದೆ. ಈವರೆಗೆ ನಡೆದ ತನಿಖೆಯಲ್ಲಿ ದೂರುದಾರ "V" ರವರನ್ನು ಮಂಪರು ಪರೀಕ್ಷೆಗೆ ಒಳಪಡಿಸಿರುವುದಿಲ್ಲ. ತನಿಖಾ ಹಂತದಲ್ಲಿ ದೂರುದಾರರನ್ನು ಮಂಪರು ಪರೀಕ್ಷೆಗೆ ಒಳಪಡಿಸುವ ಅವಶ್ಯಕತೆ ಕಂಡುಬಂದಲ್ಲಿ ಮಂಪರು ಪರೀಕ್ಷೆಗೆ ಒಳಪಡಿಸಲು ನಿಯಮಾನುಸಾರ ಕ್ರಮವಹಿಸಲಾಗುವುದು.

ಸಂಖ್ಯೆ: ಹೆಚ್‌ಡಿ 43 ಎಸ್‌ಡಿಎನ್ 2025

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು